1210 ಶ್ರೀ ರಮೇಶ ಬಂಡಿಸಿದ್ದೇಗೌಡ ಎ.ಬಿ. (ಶ್ರೀರಂಗಪಟ್ಟಣ) ಮಾನ್ಯ ಕಾರ್ಮಿಕ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಶ್ರೀರಂಗಪಟ್ಟಣ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ ಐ.ಟಿ.ಐ. ಕಾಲೇಜಿಗೆ ಪ್ರಸ್ತುತ ಸಾಲಿನಲ್ಲಿ ಹೊಸದಾಗಿ ಕೋರ್ಸ್‌ಗಳನ್ನು ಮಂಜೂರು ಮಾಡಲಾಗಿದೆಯೇ; ಹಾಗಿದ್ದಲ್ಲಿ, ಯಾವ ಕೋರ್ಸುಗಳನ್ನು ಮಂಜೂರು ಮಾಡಲಾಗಿದೆ;

ಆ) ವಿದ್ಯಾರ್ಥಿನಿಯರ ಹಿತದೃಷ್ಟಿಯಿಂದ ಯಾವ ಹೊಸ ಕೋರ್ಸ್‌ಗಳನ್ನು ಮಂಜೂರು ಮಾಡಲು ಸರ್ಕಾರ ಕ್ರಮ ಕೈಗೊಳ್ಳುತ್ತಿದೆ;

ಇ) ಶ್ರೀರಂಗಪಟ್ಟಣ ಐ.ಟಿ.ಐ. ಕಾಲೇಜಿನಲ್ಲಿ ಮಹಿಳಾ ವಿದ್ಯಾರ್ಥಿಗಳ ಹಿತದೃಷ್ಟಿಯಿಂದ ಉಡುಪು ತಯಾರಿಕೆ/ಹೊಲಿಗೆ/ಕಟಿಂಗ್ ಕೋರ್ಸ್‌ಗಳನ್ನು ತೆರೆಯಲು ಸರ್ಕಾರ ಕ್ರಮ ಕೈಗೊಳ್ಳುವುದೇ; ಹಾಗಿದ್ದಲ್ಲಿ, ಸರ್ಕಾರ ಈ ಸಂಬಂಧವಾಗಿ ಯಾವ ಕ್ರಮ ಕೈಗೊಳ್ಳುವುದು;

ಈ) ಪ್ರಸ್ತುತ ಸಾಲಿನಲ್ಲಿಯೇ ಉಡುಪು ತಯಾರಿಕೆ/ಹೊಲಿಗೆ/ಕಟಿಂಗ್ ಕೋರ್ಸ್‌ಗಳನ್ನು ತೆರೆಯಲು ಸರ್ಕಾರ ಕ್ರಮ ಕೈಗೊಂಡಿದೆಯೇ;

ಉ) ಶ್ರೀರಂಗಪಟ್ಟಣ ತಾಲ್ಲೂಕು ಮೈಸೂರಿಗೆ ಹತ್ತಿರವಾಗಿದ್ದು, ಪ್ರವಾಸಿ ತಾಣವಾಗಿರುವುದರಿಂದ, ಇಲ್ಲಿನ ಐ.ಟಿ.ಐ. ಕಾಲೇಜಿಗೆ ಪ್ರವೇಶ ಬಯಸಿ ಹೆಚ್ಚು ವಿದ್ಯಾರ್ಥಿಗಳು ಬರುತ್ತಿದ್ದು, ಇವರಿಗೆ ವೃತ್ತಿಪರ ಮೌಲ್ಯಯುತ ಕೋರ್ಸ್‌ಗಳನ್ನು ತೆರೆಯಲು ಸರ್ಕಾರ ಕ್ರಮ ಕೈಗೊಳ್ಳುವುದೇ?

ಶ್ರೀ ಬಿ.ಎನ್. ಬಚ್ಚೇಗೌಡ (ಕಾರ್ಮಿಕ ಸಚಿವರು):

ಅ) ಇಲ್ಲ.

ಆ) ಉದ್ಭವಿಸುವುದಿಲ್ಲ.

ಇ) ಮಹಿಳಾ ವಿದ್ಯಾರ್ಥಿಗಳಿಗೆ ಅನುಕೂಲವಾಗುವ ಉಡುಪು ತಯಾರಿಕೆ/ಕಟಿಂಗ್ ಮತ್ತು ಹೊಲಿಗೆ ವೃತ್ತಿಗಳನ್ನು ಮುಂದಿನ ವರ್ಷದಿಂದ ಪ್ರಾರಂಭಿಸುವ ಬಗ್ಗೆ ಸಮೀಕ್ಷೆ ಹಾಗೂ ಪರಿಶೀಲನೆ ಮಾಡಲಾಗುವುದು.

ಈ) ಇಲ್ಲ.

ಉ) ಅವಶ್ಯಕ ಮೂಲಭೂತ ಸೌಕರ್ಯಗಳನ್ನು ಅಭಿವೃದ್ಧಿಪಡಿಸಿ ನಂತರ ಹಂತ ಹಂತವಾಗಿ ಹೆಚ್ಚುವರಿ ವೃತ್ತಿಗಳನ್ನು (ಕೋರ್ಸ್) ಪ್ರಾರಂಭಿಸುವ ಬಗ್ಗೆ ಪರಿಶೀಲಿಸಲಾಗುವುದು.